ಅರಸೀಕೆರೆ ತಾಲ್ಲೂಕಿನ ಗ್ರಾಮೀಣ ಜನಸಂಖ್ಯೆ : 2,57,840 ಆಗಿದೆ. ಮಾರ್ಗಸೂಚಿಗಳ ಪ್ರಕಾರ ಅರಸೀಕೆರೆ ತಾಲ್ಲೂಕಿನಲ್ಲಿ 2 ಸಮುದಾಯ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿದ್ದು, 2 ಸಮುದಾಯ ಆರೋಗ್ಯ ಕೇಂದ್ರಗಳು ಅಂದರೆ (1) ಗಂಡಸಿ (2) ಜೆ.ಸಿ.ಪುರ ಇಲ್ಲಿ ಕಾರ್ಯನಿರ್ವಹಿಸುತ್ತಿವೆ. ಅಲ್ಲದೆ, ಒಂದು ತಾಲ್ಲೂಕು ಆಸ್ಪತ್ರೆಯು ಸಹ ಕಾರ್ಯನಿರ್ವಹಿಸುತ್ತಿದೆ. ಆದುದರಿಂದ, ಬಾಣಾವರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಲು ಅವಕಾಶವಿರುವುದಿಲ್ಲ.

ಮುಂದುವರೆದು, ರಾಜ್ಯದಲ್ಲಿ ಹೊಸ ಆಸ್ಪತ್ರೆಗಳ ಪ್ರಾರಂಭಿಸುವಿಕೆ ಮತ್ತು ಮೇಲ್ದರ್ಜೆಗೇರಿಸುವಿಕೆಗೆ ಬದಲಾಗಿ ಅಸ್ತಿತ್ವದಲ್ಲಿರುವ ಆಸ್ಪತ್ರೆಗಳಿಗೆ ಮೂಲ ಸೌಕರ್ಯಗಳಾದ ಕಟ್ಟಡ, ಉಪಕರಣಗಳು, ವೈದ್ಯರು ಮತ್ತು ಸಿಬ್ಬಂದಿ ಒದಗಿಸಿ ಅವುಗಳ ಬಲವರ್ಧನೆಗೆ ಹೆಚ್ಚು ಗಮನಹರಿಸಬೇಕಾಗಿದೆ. ಆದುದರಿಂದ, ರಾಜ್ಯದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸ್ಥಾಪಿಸುವುದು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ಸಾರ್ವಜನಿಕ ಆಸ್ಪತ್ರೆ ಇತ್ಯಾದಿಯ ಮೇಲ್ದರ್ಜೆಗೇರಿಸುವಿಕೆಯನ್ನು ದಿನಾಂಕ : 11-01-2011 ರಿಂದ ಮೂರು ವರ್ಷಗಳ ಅವಧಿಗೆ ಒಂದು ನೀತಿ ನಿರ್ಣಯವಾಗಿ ಸರ್ಕಾರವು ತಡೆಹಿಡಿದಿದೆ.

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಉಪನ್ಯಾಸಕರ ಹುದ್ದೆ ಭರ್ತಿ

276 (174) ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ. ಲೇಔಟ್) :- ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

ಅ) ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು ;

ಆ) ಈ ಕಾಲೇಜುಗಳಲ್ಲಿ ವಿವಿಧ ವಿಷಯಗಳ ಖಾಲಿ ಇರತಕ್ಕ ಉಪನ್ಯಾಸಕರ ಹುದ್ದೆಗಳೆಷ್ಟು ;

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಸಿ.ಟಿ. ರವಿ (ಮಾನ್ಯ ಉನ್ನತ ಶಿಕ್ಷಣ ಸಚಿವರು):-

ಅ) ಒಟ್ಟು 360.

ಆ) ಒಟ್ಟು 847.

ಇ) ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬುವ ಬಗ್ಗೆ ಈಗಾಗಲೇ ಕ್ರಮ ಜರುಗಿಸಲಾಗುತ್ತಿದೆ.